# ದಿನಾಂಕ: 25-10-2010ರಂದು ಪೂರ್ವಾಹ್ನ: 11-00 ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀ ಹೆಚ್.ವೈ.ಚಂದ್ರಶೇಖರ್
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ :07　　　　　　ಗೈರು ಹಾಜರಿ:00

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ) ರವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ನಡೆಸಿ ಸಭೆಯನ್ನು ನಡೆಸಿಕೊಡಬೇಕೆಂದು ಅಧ್ಯಕ್ಷರನ್ನು ಕೋರಿದರು. | |
| 1 | ವಿದ್ಯಾರ್ಥಿನಿಲಯಗಳಿಗೆ ಸೋಲಾರ್ ವಾಟರ್ ಹೀಟರ್ ಮತ್ತು ಸೋಲಾರ್ ಲೈಟ್ ಗಳನ್ನು ಅಳವಡಿಸಿರುವ ಬಾಬ್ತನ್ನು ಬಗ್ಗೆ. | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಹಿಂದಿನ ಸಭೆಯ ತೀರ್ಮಾನದಂತೆ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿನಿಲಯಗಳಿಗೆ 2010-11ನೇ ಸಲಿನಲ್ಲಿ ನಿಗದಿಗೊಳಿಸಿರುವ ಅನುದಾನಕ್ಕೆ ( ಲೆಕ್ಕಶೀರ್ಷಿಕೆ 2225-01-277-0-61) ತಕ್ಕಂತೆ ಸೋಲಾರ್ ವಾಟರ್ ಹೀಟರ್ ಹಾಗೂ ಸೋಲಾರ್ ಲೈಟ್‌ಗಳನ್ನು ಡಿ.ಜಿ.ಎಸ್. ಅಂಡ್ ಡಿ ದರದಲ್ಲಿ ಖರೀದಿ ಮಾಡಿ ವಿದ್ಯಾರ್ಥಿನಿಲಯಗಳಿಗೆ ಅಳವಡಿಸಿರುವುದನ್ನು ಪರಿಶೀಲಿಸಿ ಖಾತರಿಪಡಿಸಿಕೊಳ್ಳಲಾಗಿದೆ. ಆದುದರಿಂದ, ಸಂಬಂಧಪಟ್ಟವರಿಗೆ ಹಣವನ್ನು ಪಾವತಿಸಲು ಸಭೆಯು ಅನುಮತಿ ನೀಡಬೇಕೆಂದು ಕೋರಿದರು.<br>ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಮೆನು ಚಾರ್ಟ್ ಹಾಕುವಂತೆ ಹಿಂದಿನ ಸಭೆಯಲ್ಲಿ ತಿಳಿಸಲಾಗಿತ್ತು. ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಕುರಿತು ಮಾಹಿತಿ ನೀಡುವಂತೆ ಮತ್ತು ಒಂದೇ ಕಡೆ 10-15 ವರ್ಷದಿಂದ ಕೆಲಸ ನಿರ್ವಹಿಸುತ್ತಿರುವ ಅಡುಗೆಯವರು ಮತ್ತು ಮೇಲ್ವಿಚಾರಕರನ್ನು ಬದಲಾವಣೆ ಮಾಡುವ ಬಗ್ಗೆ ಕ್ರಮ ವಹಿಸಬೇಕೆಂದು ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರಿಗೆ ತಿಳಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರು ಉತ್ತರಿಸುತ್ತಾ, ಈಗ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ವಾರದ 7 ದಿನಗಳಲ್ಲಿ ಏನೇನು ನೀಡಲಾಗುತ್ತದೆ ಎಂಬ ಬಗ್ಗೆ ಮೆನು ಚಾರ್ಟನ್ನು ಹಾಕಲಾಗಿದೆ ಮತ್ತು ಮಕ್ಕಳು ಊರಿಗೆ ಹೋಗದಂತೆ ತಡೆಯಲು ವಿದ್ಯಾರ್ಥಿನಿಲಯದಲ್ಲಿ ಭಾನುವಾರದಂದು ಮಾಂಸಾಹಾರಿ ಊಟವನ್ನು ನೀಡಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು. | ಸಭೆಯಲ್ಲಿ ಚರ್ಚಿಸಿದಂತೆ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ 2010-11ನೇ ಸಾಲಿನಲ್ಲಿ ನಿಗದಿ ಗೊಳಿಸಿರುವ ಅನುದಾನಕ್ಕೆ (ಲೆಕ್ಕ ಶೀರ್ಷಿಕೆ 2225-01-277-0-61) ತಕ್ಕಂತೆ ಸೋಲಾರ್ ವಾಟರ್ ಹೀಟರ್ ಹಾಗೂ ಸೋಲಾರ್ ಲೈಟ್‌ಗಳನ್ನು ಡಿ.ಜಿ.ಎಸ್. ಅಂಡ್ ಡಿ ದರದಲ್ಲಿ ಖರೀದಿ ಮಾಡಿ ವಿದ್ಯಾರ್ಥಿನಿಲಯ ಗಳಿಗೆ ಅಳವಡಿಸಿರುವ ಬಾಬ್ತನ್ನು ಸಂಬಂಧ ಪಟ್ಟವರಿಗೆ ಪಾವತಿಸಲು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ಸಭೆಯು ಸರ್ವಾನು ಮತದಿಂದ ಅನುಮತಿ ನೀಡಿತು. |

| | | | |
|---|---|---|---|
| 2 | ಹಾಸನ ನಗರದಲ್ಲಿ ಹೆಚ್ಚುವರಿ ಯಾಗಿ ತಲಾ ಒಂದೊಂದು ಬಾಲಕರ ಹಾಗೂ ಬಾಲಕಿ ಯರ ವಸತಿ ನಿಲಯವನ್ನು ಪ್ರಾರಂಭಿಸುವ ಬಗ್ಗೆ | ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ ಹಾಸನ ಇವರು ಮನವಿಯನ್ನು ಸಲ್ಲಿಸಿ, ಹಾಸನ ನಗರದಲ್ಲಿ ಸುತ್ತಮುತ್ತಲಿನ ಗ್ರಾಮಗಳ ಬಡ ಹಾಗೂ ಹಿಂದುಳಿದ ವರ್ಗಗಳ ಹಲವು ವಿದ್ಯಾರ್ಥಿಗಳು, ಪ್ರಥಮ ಪಿ.ಯು.ಸಿ– ವಿಜ್ಞಾನ, ಎಂ.ಬಿ.ಬಿ.ಎಸ್., ಬಿ.ಇ, ಡಿಪ್ಲೋಮಾ ಇತ್ಯಾದಿ ವಿಶೇಷ ಕೋರ್ಸ್‌ಗಳ ವಿದ್ಯಾಭ್ಯಾಸಕ್ಕಾಗಿ ಹಾಸನ ನಗರದ ಕಾಲೇಜುಗಳಿಗೆ ಪ್ರವೇಶಾವಕಾಶವನ್ನು ಪಡೆಯುತ್ತಿದ್ದಾರೆ. ವಿದ್ಯಾರ್ಥಿಗಳು ಕಾಲೇಜಿಗೆ ಗ್ರಾಮಗಳಿಂದ ಬರಲು ಸೂಕ್ತ ಬಸ್ ಸೌಕರ್ಯದ ಕೊರತೆ ಇರುವುದರಿಂದ, ಪ್ರತಿದಿನ ಪ್ರಯಾಣ ಮಾಡಿ ವಿದ್ಯಾಬ್ಯಾಸ ಮಾಡುವುದು ಕಷ್ಟಕರ ಹಾಗೂ ಅಭ್ಯಾಸ ಮಾಡಲು ತುಂಬಾ ತೊಂದರೆಯಾಗುವುದರಿಂದ, ಹಾಸನ ನಗರದಲ್ಲಿ 200 ಮಂದಿ ಬಾಲಕಿಯರಿಗೆ ಹಾಗೂ 200 ಮಂದಿ ಬಾಲಕರಿಗೆ ಒಂದೊಂದು ಪ್ರತ್ಯೇಕ ಹಿಂದುಳಿದ ವರ್ಗದ ವಸತಿನಿಲಯವನ್ನು ಪ್ರಾರಂಭಿಸುವುದು ಸೂಕ್ತವಾಗಿದ್ದು, ಸಂಬಂಧಿಸಿದವರಿಗೆ ಸೂಕ್ತ ಕ್ರಮವನ್ನು ತೆಗೆದುಕೊಳ್ಳಲು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಪರಿಶೀಲಿಸಲಾಯಿತು.<br>ಹಾಸನ ನಗರದಲ್ಲಿ ವಿಜ್ಞಾನ, ಬಿ.ಇಡಿ, ಬಿ.ಇ, ಡಿಪ್ಲೋಮಾ, ಎಂ.ಬಿ.ಬಿ.ಎಸ್ ಇತ್ಯಾದಿ ಕೋರ್ಸ್ ಗಳ ಕಾಲೇಜುಗಳು ನಡೆಯುತ್ತಿದ್ದು, ವಿದ್ಯಾರ್ಥಿನಿಲಯದಲ್ಲಿ ಸ್ಥಳಾವಕಾಶ ಕೋರಿ ಹಾಲಿ ಸುಮಾರು 800 ಅರ್ಜಿಗಳು ಬಾಕಿ ಉಳಿದಿರುತ್ತವೆ. ಇದರಿಂದ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ವ್ಯಾಸಂಗ ಮಾಡಲು ಬಹಳ ತೊಂದರೆ ಯಾಗಿರುತ್ತದೆ. ಆದ್ದರಿಂದ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುಕೂಲ ವಾಗುವಂತೆ ಹಾಸನ ನಗರದಲ್ಲಿ 200 ಮಂದಿ ಬಾಲಕಿ ಯರಿಗೆ ಹಾಗೂ 200 ಮಂದಿ ಬಾಲಕರಿಗೆ ಒಂದೊಂದು ಪ್ರತ್ಯೇಕ ಹಿಂದುಳಿದ ವರ್ಗದ ವಸತಿ ನಿಲಯವನ್ನು ಮಂಜೂರು ಮಾಡ ಬೇಕೆಂದು ಸರ್ಕಾರಕ್ಕೆ ಪ್ರಸ್ತಾವನೆ ಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| | | ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದಂತೆ, ದುರುಪಯೋಗವಾಗದ ರೀತಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ವಿದ್ಯಾರ್ಥಿವೇತನವನ್ನು ವಿತರಣೆ ಮಾಡಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಹಾಗೂ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ತಿಳಿಸಲಾಯಿತು.<br>ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಎಲ್ಲಾ ತಾಲ್ಲೂಕುಗಳಿಂದ ಕ್ರಿಯಾ ಯೋಜನೆಗಳು ಅನುಮೋದನೆಗೊಂಡಿದ್ದು, ವಿವಿಧ ಇಲಾಖೆಯವರು ಲಭ್ಯವಿರುವ ಅನುದಾನವನ್ನು ವಿನಿಯೋಗಿಸಿ ಪ್ರಗತಿಯನ್ನು ಸಾಧಿಸಬೇಕೆಂದು ತಿಳಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಟ್ಟಡ ಹಾಗೂ ಇತರೆ ಕಾಮಗಾರಿಗಳ ಅನುಷ್ಠಾನದ ಬಗ್ಗೆ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಕಳುಹಿಸಿಕೊಡುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ |

| | | | |
|---|---|---|---|
| | | ಪರಿಶಿಷ್ಟ ಜಾತಿ/ ವರ್ಗಗಳ ಕಾಲೋನಿಗಳಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಿಸಿದಂತೆ, ಐ.ಎಂ.ಐ.ಎಸ್ ಅಡಿಯಲ್ಲಿ ದಾಖಲು ಮಾಡಿರುವ ಕಾಮಗಾರಿಗಳನ್ನು ಅನುಷ್ಠಾನ ಮಾಡುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಇವರು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಅನುಷ್ಠಾನ ಮಾಡುವಂತೆ ತಿಳಿಸಲಾಯಿತು.<br>ಸಮಾಜ ಕಲ್ಯಾಣ ಇಲಾಖೆಯ ಕಟ್ಟಡ ದುರಸ್ಥಿ ಯೋಜನೆಯಡಿ ರೂ.1.00ಲಕ್ಷಗಳವರೆಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಅಧಿಕಾರವಿದ್ದು, ಎಲ್ಲಾ ಕಾಮಗಾರಿಗಳನ್ನು ಆದಷ್ಟು ತ್ವರಿತವಾಗಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಲಾಯಿತು.<br>ಪರಿಶಿಷ್ಟ ಜಾತಿ/ವರ್ಗಗಳ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯ ಯೋಜನೆಯಡಿಯಲ್ಲಿ ನಿಗದಿಪಡಿಸಿರುವ ಅನುದಾನವನ್ನು ವಿನಿಯೋಗಿಸಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಕಟ್ಟಡಗಳ ದುರಸ್ಥಿ ಯೋಜನೆಯಡಿ ಜಿಲ್ಲಾ ಪಂಚಾಯಿತಿ ವತಿಯಿಂದ ನೇರವಾಗಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಅನುದಾನ ಬಿಡುಗಡೆಯಾಗುತ್ತಿದ್ದು, ಅನುದಾನದ ವಿನಿಯೋಗದ ಬಗ್ಗೆ ಮತ್ತು ಕಾಮಗಾರಿಗಳ ಬಗ್ಗೆ ಪ್ರಗತಿ ವರದಿಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ಕಳುಹಿಸುವಂತೆ ನಿರ್ದೇಶನವನ್ನು ನೀಡಬೇಕೆಂದು ಕೋರಿದರು.<br>ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆ ಬಗ್ಗೆ ಸರ್ಕಾರದ ಮಾರ್ಗಸೂಚಿಗಳನ್ನು ಜಿಲ್ಲಾ ಪಂಚಾಯಿತಿ ಸದಸ್ಯರಿಗೆ ನೀಡಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಇವರಿಗೆ ತಿಳಿಸಲಾಯಿತು. | ವಿಭಾಗ, ಹಾಸನ ಮತ್ತು ಚನ್ನರಾಯ ಪಟ್ಟಣ ಇವರಿಗೆ ಸೂಚಿಸಲಾಯಿತು. |
| | | ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಹೆಚ್.ವೈ ಚಂದ್ರಶೇಖರ್)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ